ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಸುತ್ತೋಲೆ/ಸ.ಪ್ರ.ದ.ಕಾ/ಆಯವ್ಯಯ/04/2023-24.

ಕಾಲೇಜುಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು,ದಿನಾಂಕ:27.10.2023.

ಇವರಿಗೆ.
ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
ಮಾನ್ಯರೇ,

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2023-24ನೇ ಸಾಲಿನಲ್ಲಿ ಹೊಸದಾಗಿ ನೇಮಕಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಲಕ್ಟೋಬರ್-2023ರ ಮಾಹೆ ಹಾಗೂ ಕೊರತೆಯಾಗಿರುವ ಮಾಹೆಗಳಿಗೆ ಗೌರವಧನಕ್ಕಾಗಿ ಮಾಹಿತಿಯನ್ನು ಸಲ್ಲಿಸುವ ಕುರಿತು.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ:ಇಡಿ/171/ಡಿಸಿಇ2023, ದಿನಾಂಕ:28.08.2023.
2.ಪತ್ರ ಸಂಖ್ಯೆ: ಕಾಶಿಇ/ನೇವಿ-1/ಅಉಅ/90/2023-24, ದಿನಾಂಕ:24.08.2023, ದಿ:13.09.2023 ಮತ್ತು ದಿನಾಂಕ:21.09.2023
3.ಈ ಕಛೇರಿಯ ಅನುದಾನದ ಬಿಡುಗಡೆಯ ಆದೇಶದ ಸಂಖ್ಯೆ: ಕಾಶಿಇ/ ಆಯವ್ಯಯ /ಅ.ಉ.ಗೌ/ಅ.ಬಿ/04/2023-24,ದಿನಾಂಕ:19.10.2023.

*******

ಪ್ರಸ್ತಾಪಿತ ವಿಷಯ ಹಾಗೂ ಉಲ್ಲೇಖ-1&2ಕ್ಕೆ ಸಂಬಂಧಿಸಿದಂತೆ ಕಾಲೇಜು ಇಲಾಖಾ ವ್ಯಾಪ್ತಿಯಡಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2023-24ನೇ ಸಾಲಿನಲ್ಲಿ ಹೆಚ್ಚುವರಿ ಕಾರ್ಯಭಾರಕ್ಕೆ ನೇಮಕಗೊಂಡು ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರುಗಳ ಮಾಹಿತಿಯನ್ನು ಇ.ಎಂ.ಐ.ಎಸ್ ನಲ್ಲಿ ಅಪ್ ಡೇಟ್ ಮಾಡಲು ಕಾಲೇಜುಗಳ ಪ್ರಾಂಶುಪಾಲರುಗಳು ಕ್ರಮವಹಿಸಿ ಹಾಗೂ ಅಕ್ಟೋಬರ್-2023ರ ಮಾಹೆಗೆ ಆವಶ್ಯಕವಾಗಿರುವ ಗೌರವಧನದ ಮಾಹಿತಿಯನ್ನು ಹಾಗೂ ಉಲ್ಲೇಖಿತ ಪತ್ರ ಸಂಖ್ಯೆ-3ರಂದು ಗೌರವಧನವನ್ನು ಪಾವತಿಸಲು ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಸದರಿ ಅನುದಾನದಲ್ಲಿ ಗೌರವಧನದ ಮಾಹಿತಿಯನ್ನು ತಡವಾಗಿ ಪ್ರಸ್ತಾವನೆಯನ್ನು ಸಲ್ಲಿಸಿರುವುದು ಹಾಗೂ ಸ್ಪಷ್ಟ ವಿವರಣೆಯೊಂದಿಗೆ ಸಲ್ಲಿಸದೇ ಇರುವುದು ಕಂಡುಬಂದಿರುತ್ತದೆ. ಆದ್ದರಿಂದ ನಿಗಧಿತ ಅವಧಿಯೊಳಗೆ ಗೌರವಧನದ ಮಾಹಿತಿಯನ್ನು ಸಲ್ಲಿಸದೇ ಇರುವ ಕಾಲೇಜುಗಳಿಗೆ ಗೌರವಧನವನ್ನು ಬಿಡುಗಡೆ ಮಾಡುವುದಿಲ್ಲ. ಗೌರವಧನವನ್ನು ನಿಗಧಿತ ದಿನಾಂಕದೊಳಗೆ ಪಾವತಿಸಲು ಸಾಧ್ಯವಾಗದಿದ್ದಲ್ಲಿ ಪ್ರಾಂಶುಪಾಲರುಗಳೇ ನೇರ ಹೊಣೆಗಾರರಾಗಿರುತ್ತಾರೆ. ಆದ್ದರಿಂದ ಈ ಕೂಡಲೇ ಕೊರತೆಯಾಗಿರುವ ಗೌರವಧನ ಹಾಗೂ ಅಕ್ಟೋಬರ್-2023ರ ಮಾಹೆಗೆ ಆವಶ್ಯಕವಾಗಿರುವ ಅನುದಾನದ ಮಾಹಿತಿಯನ್ನು ಗೂಗಲ್ ಫಾರಂನಲ್ಲಿ ಅಪ್‌ಲೋಡ್ ಮಾಡಲು ಹಾಗೂ ಇ-ಮೇಲ್ ವಿಳಾಸ dcegfbudget@gmail.com ಕ್ಕೆ ಎಕ್ಸೆಲ್ ಫಾರ್ಮೆಟ್‌ನಲ್ಲಿ ದಿನಾಂಕ:31.10.2023ರೊಳಗೆ ಕಳುಹಿಸಿಕೊಡಲು ಸೂಚಿಸಲಾಗಿದೆ.

ತಮ್ಮ ವಿಶ್ವಾಸಿ

27/10/2023

ಲೆಕ್ಕಾಧಿಕಾರಿಗಳು

ಪ್ರತಿಯನ್ನು.

1. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ,ಕೇಂದ್ರ ಕಛೇರಿ ವಿಭಾಗ, ಬೆಂಗಳೂರು- ಸದರಿ ಆದೇಶವನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಕ್ತಕ್ರಮಕ್ಕಾಗಿ.
2. ಪ್ರಾದೇಶಿಕ ಜಂಟಿ ನಿರ್ದೇಶಕರು. ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರ್ಗಿ – ಸೂಕ್ತಕ್ರಮಕ್ಕಾಗಿ
3. ಕಛೇರಿ ಪ್ರತಿ.